ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012 ವೆಬ್‌ಸೈಟ್: https://kea.kar.nic.in

ದೂರವಾಣಿ: 080–23 460 460 (5 ಮಾರ್ಗಗಳು). ಫ್ಯಾಕ್ಸ್: 080–2346 1576, ಇಮೇಲ್: keauthority-ka@nic.in

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್–09/2019–20 ದಿನಾಂಕ: 06–09–2019

## ಅಧಿಸೂಚನೆ

## ಆಯುರ್ವೇದ, ಯೋಗ & ನ್ಯಾಚುರೋಪತಿ, ಯುನಾನಿ ಮತ್ತು ಹೋಮಿಯೋಪತಿ ಸ್ನಾತಕೋತ್ತರ ಕೋರ್ಸುಗಳ ಪ್ರವೇಶ 2019–20 (ಪಿಜಿಆಯುಷ್)

ಆಯುರ್ವೇದ, ಯೋಗ & ನ್ಯಾಚುರೋಪತಿ, ಯುನಾನಿ ಮತ್ತು ಹೋಮಿಯೋಪತಿ ಸಚಿವಾಲಯ ನಿರ್ದೇಶಕರು, ನವದೆಹಲಿ ಇವರ ಮಾರ್ಗದರ್ಶಿ ಸೂತ್ರಗಳ ಅನ್ವಯ, ಸರ್ಕಾರವು ತನ್ನ ಆದೇಶ ಸಂಖ್ಯೆ: ಆಕುಕ 70 ಪಿಟಿಡಿ 2017 ಬೆಂಗಳೂರು ದಿನಾಂಕ 06–09–2017 ರ ಅನ್ವಯ ಆಯುರ್ವೇದ, ಯೋಗ & ನ್ಯಾಚುರೋಪತಿ, ಯುನಾನಿ ಮತ್ತು ಹೋಮಿಯೋಪತಿ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಕ್ಕಾಗಿ All India Ayush Post Graduate Entrance Test (AIAPGET) ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಅನ್ನು ನಡೆಸಲು ಪ್ರಾಧಿಕಾರಕ್ಕೆ ಆದೇಶಿಸಿದೆ.

AIAPGET -2019 ರಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಂದ ಸರ್ಕಾರವು ನಿಗದಿಪಡಿಸುವ 2019ನೇ ಸಾಲಿನ ಸ್ನಾತಕೋತ್ತರ ಆಯುಷ್ ಸೀಟುಗಳ / ಕೋರ್ಸುಗಳ ಪ್ರವೇಶಕ್ಕಾಗಿ ಪ್ರಾಧಿಕಾರವು ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಿದೆ. ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳು **ದಿನಾಂಕ 07–09–2019 ರ ಸಂಜೆ 4.00 ರಿಂದ 10–09–2019ರ ಸಂಜೆ 5.30 ರೊಳಗೆ** ಆನ್‌ಲೈನ್ ಮೂಲಕ ಕಡ್ಡಾಯವಾಗಿ ಅರ್ಜಿಯನ್ನು ಸಲ್ಲಿಸಬೇಕು. ನೋಂದಣಿ ಶುಲ್ಕ, [Rs.2,000/- (Rs.1000/- for SC/ST and Cat-I of Karnataka] ವೇಳಾಪಟ್ಟಿ, ದಾಖಲಾತಿ ಪರಿಶೀಲನೆಗೆ ಮೂಲ ದಾಖಲಾತಿಗಳನ್ನು ಸಲ್ಲಿಸಬೇಕಾದ ವಿವರಗಳು ಮತ್ತು ಇನ್ನಿತರ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in** ನಲ್ಲಿ ನೋಡಲು ಸೂಚಿಸಿದೆ.

AIAPGET -2019 ರ ಮಾಹಿತಿ ಪುಸ್ತಕದಲ್ಲಿ ನೀಡಿರುವ ಅರ್ಹತಾ ಷರತ್ತುಗಳು ಮತ್ತು ಇತರೆ ಮಾಹಿತಿಗಳನ್ನೂ ಸಹ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. SC/ST/Cat-1/2A/2A/3A/3B ಅರ್ಹತಾ ಮಾನದಂಡಗಳು ಕರ್ನಾಟಕದ ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ ಎಂಬುದನ್ನು ಗಮನಿಸಿ.

ಅಭ್ಯರ್ಥಿಯ ಅರ್ಹತೆಯು ತಾತ್ಕಾಲಿಕವಾಗಿರುತ್ತದೆ ಮತ್ತು AIAPGET-2019 ರ ಮಾಹಿತಿ ಪುಸ್ತಕದಲ್ಲಿ ನೀಡಿರುವ ಅರ್ಹತಾ ಷರತ್ತುಗಳಿಗೆ ಒಳಪಟ್ಟಿರುತ್ತದೆ. ಹಾಗೆಯೇ ಪ್ರವೇಶವು ಸಂಬಂಧಿಸಿದ CCIM / CCH / ಸರ್ಕಾರ / ಅರ್ಹತಾ ಪ್ರಾಧಿಕಾರ / ವಿಶ್ವವಿದ್ಯಾನಿಲಯ ಅನುಮೋದನೆಗೆ ಒಳಪಟ್ಟಿರುತ್ತದೆ. ನೋಂದಣಿ ಮಾಡುವುದರಿಂದಾಗಲೀ ಅಥವಾ ದಾಖಲಾತಿಗಳನ್ನು ಪರಿಶೀಲನೆ ಮಾಡಿಕೊಳ್ಳುವುದರಿಂದಾಗಲೀ ಕರ್ನಾಟಕದ ಆಯುಷ್ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಕ್ಕಾಗಿ ಅಭ್ಯರ್ಥಿಗಳು ಯಾವುದೇ ಹಕ್ಕನ್ನು ಪಡೆಯುವುದಿಲ್ಲ.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in** ಗೆ ಭೇಟಿ ನೀಡಲು ಕೋರಿದೆ.

ಸಹಿ/– (ಆರ್. ಗಿರೀಶ್, ಭಾಆಸೇ)
ಕಾರ್ಯನಿರ್ವಾಹಕ ನಿರ್ದೇಶಕರು

DIPR/DDU/2019-20